ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆರಡನೆಯ ಅಧಿವೇಶನ**

**ಮಂಗಳವಾರ, ದಿನಾಂಕ: ೨೨ನೇ ನವೆಂಬರ್, ೨೦೧೬**

---

## ಸಮೂಹ – II

೧. ಇಂಧನ ಸಚಿವರು

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೩. ಸಹಕಾರ ಮತ್ತು ಸಕ್ಕರೆ ಸಚಿವರು

೪. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೫. ಕೃಷಿ ಸಚಿವರು

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು

೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು

---

## ರಸ್ತೆಗಳ ದುರಸ್ಥಿ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೧೬ (೨೪೧) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಬಹುತೇಕ ರಸ್ತೆಗಳು ತುಂಬಾ ಶಿಥಿಲವಾಗಿದ್ದು, ವಾಹನ ಸಂಚಾರಕ್ಕೆ ತುಂಬಾ ಅಡಚಣೆಯಾಗಿ, ಅಲ್ಲಲ್ಲಿ ಗುಂಡಿಗಳು ಇರುವುದರಿಂದ ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆಯಾಗಿ, ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕಳೆದ ೨ ವರ್ಷಗಳಿಂದ ರಸ್ತೆಗಳ ದುರಸ್ಥಿಗೆಂದು ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಈ ರೀತಿ ಬಿಡುಗಡೆಯಾದ ಅನುದಾನದಲ್ಲಿ ದುರಸ್ಥಿಗೊಂಡ ರಸ್ತೆಗಳಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗುತ್ತಿಗೆದಾರರ ಜೊತೆ ಅಧಿಕಾರಿಗಳು ಶಾಮೀಲಾಗಿ ರಸ್ತೆ ಕಾಮಗಾರಿಗಳು ಕಳಪೆ ಮಟ್ಟದಲ್ಲಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರ ಇದುವರೆಗೂ ಎಷ್ಟು ಜನರ ವಿರುದ್ಧ ಕ್ರಮ ಜರುಗಿಸಿದೆ ? (ವಿವರ ನೀಡುವುದು)

## ರೈತರಿಗೆ ಕೃಷಿ ಇಲಾಖೆಯಿಂದ ದೊರಕುವ ಸವಲತ್ತುಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೭ (೧೮೪) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಕೃಷಿ ಇಲಾಖೆಯ ವಿವಿಧ ಸ್ತರದ ಕಛೇರಿಗಳಲ್ಲಿ ಮಂಜೂರಾದ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಶ್ರೇಣಿವಾರು ಕಛೇರಿವಾರು ವಿವರ ಒದಗಿಸುವುದು) ಗಣನೀಯ ಪ್ರಮಾಣದ ಸಿಬ್ಬಂದಿಗಳ ಕೊರತೆಯಿಂದಾಗಿ ಇಲಾಖೆಯಿಂದ ರೈತರಿಗೆ ಕಷ್ಟ ಸಮಯದಲ್ಲಿ ಪರಿಕರ ಹಾಗೂ ಮಾಹಿತಿ ದೊರೆಯದೇ ತೊಂದರೆಯಾಗಿರುವುದರಿಂದ, ಈ ಬಗ್ಗೆ ಕೈಗೊಂಡ ಪರಿಹಾರ ಕ್ರಮವೇನು ;

(ಆ) ಕರಾವಳಿ ಜಿಲ್ಲೆಗಳಲ್ಲಿ ಭತ್ತದ ಕೃಷಿಯು ಲಾಭದಾಯಕವಲ್ಲದ ಬೆಳೆಯಾಗಿರುವ ಹಿನ್ನೆಲೆಯಲ್ಲಿ ಕೃಷಿ ಯಾಂತ್ರೀಕರಣಕ್ಕೆ ಉತ್ತೇಜಿಸಲು ಈ ಹಿಂದೆ ಭತ್ತದ ಬೆಳೆಗೆ ಎಕರೆವಾರು ನೀಡಲಾಗುತ್ತಿರುವ ಪ್ರೋತ್ಸಾಹ ಧನವನ್ನು ಸ್ಥಗಿತಗೊಳಿಸಲು ಕಾರಣವೇನು ; ಈ ಬಗ್ಗೆ ಪರ್ಯಾಯ ಯೋಜನೆ ಜಾರಿಗೆ ತರುವ ಯೋಚನೆ ಸರ್ಕಾರದ ಮುಂದಿದೆಯೇ ;

(ಇ) ಕರಾವಳಿ ಜಿಲ್ಲೆಯ ಮಲೆನಾಡು ಪ್ರದೇಶಗಳಲ್ಲಿ ಕಾಡು ಪ್ರಾಣಿಗಳಿಂದ ಬೆಳೆ ಹಾನಿಯಾಗುತ್ತಿರುವ ಬಗ್ಗೆ ಬಂದೂಕು ಪರವಾನಿಗೆ ಸರಳೀಕರಣಕ್ಕೆ ಕೃಷಿ ಇಲಾಖೆಯ ರೈತಪರ ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಕೈಗೊಳ್ಳಲಾದ ಕ್ರಮವೇನು ?

## ರಾಜ್ಯದ ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**
**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೧೮ (೨೬೩+೨೨೪) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಳೆದ ಮೂರು ವರ್ಷಗಳಲ್ಲಿ ಕಬ್ಬು ಬೆಳೆಗಾರರಿಗೆ ನೀಡಬೇಕಾದ ಬಾಕಿ ಮೊತ್ತವೆಷ್ಟು ; ಮತ್ತು ಪಾವತಿಸಿದ ಬಾಕಿ ಮೊತ್ತವೆಷ್ಟು ; (ಕಾರ್ಖಾನೆವಾರು ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಳೆದ ಮೂರು ವರ್ಷಗಳಲ್ಲಿ ಕಬ್ಬು ಬೆಳೆಗಾರರಿಗೆ ನೀಡಬೇಕಾದ ಬಾಕಿ ಮೊತ್ತವನ್ನು ಪಾವತಿಸಿದ್ದಲ್ಲಿ, ಅವರಿಗೆ ಖರೀದಿ ತೆರಿಗೆ ಹಾಗೂ ರಸ್ತೆ ಸುಂಕದಿಂದ ವಿನಾಯಿತಿ ನೀಡುವುದಾಗಿ ಸರ್ಕಾರ ಘೋಷಿಸಿದ್ದು ನಿಜವೇ ;

(ಇ) ನಿಜವಿದ್ದಲ್ಲಿ, ಈ ರೀತಿ ಸರ್ಕಾರದಿಂದ ಖರೀದಿ ತೆರಿಗೆ ಮತ್ತು ರಸ್ತೆ ಸುಂಕದಿಂದ ವಿನಾಯಿತಿ ಪಡೆದ ಸಕ್ಕರೆ ಕಾರ್ಖಾನೆಗಳೆಷ್ಟು ; ಇದರಿಂದ ಸರ್ಕಾರದ ಬೊಕ್ಕಸಕ್ಕೆ ಆದ ನಷ್ಟವೆಷ್ಟು ;

(ಈ) ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಗಾರರಿಗೆ ಪಾವತಿಸಬೇಕಾಗಿರುವ ಬಾಕಿ ಮೊತ್ತ ಇರುವಾಗ, ಕಾರ್ಖಾನೆಗಳಿಗೆ ವಿನಾಯಿತಿ ನೀಡಿದ ಸರ್ಕಾರದ ಕ್ರಮ ಸರಿಯೇ ;

(ಉ) ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ಬೆಳೆಗಾರರಿಗೆ ಪಾವತಿಸಬೇಕಾದ ಬಾಕಿ ಮೊತ್ತವನ್ನು ಕೊಡಿಸಲು ಸರ್ಕಾರ ಕೈಗೊಂಡ ಕ್ರಮವೇನು ;

(ಊ) ಬಾಗಲಕೋಟೆ ಜಿಲ್ಲೆಯ ೭ ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ಬೆಳೆಗಾರ ರೈತರಿಗೆ ೨೭೦ ಕೋಟಿ ಹಣ ಬಾಕಿ ಕೊಡಬೇಕಾಗಿರುವುದು ನಿಜವೇ ; ನಿಜವಾಗಿದ್ದಲ್ಲಿ, ಪ್ರತಿ ಕಾರ್ಖಾನೆಯ ಒಟ್ಟು ಬಾಕಿ ಹಾಗೂ ಎಷ್ಟು ? ತಿಂಗಳಿನ ಬಾಕಿ ಎಂಬುದರ ವಿವರ ನೀಡುವುದು ;

## ಹೆದ್ದಾರಿ ಟೋಲ್‌ನಲ್ಲಿ ಆಂಬುಲೆನ್ಸ್‌ಗೆ ಪ್ರತ್ಯೇಕ ದ್ವಾರ ನಿರ್ಮಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೯ (೨೨೨) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರಸ್ತೆ ಟೋಲ್‌ಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇವುಗಳನ್ನು ಯಾವ ಯಾವ ಸಂಸ್ಥೆಯವರು ನಿರ್ವಹಿಸುತ್ತಿದ್ದಾರೆ ; ಟೋಲ್‌ವಾರು ಮಾಹಿತಿ ನೀಡುವುದು ;

(ಇ) ಆಂಬುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸಲಾಗಿದೆಯೇ ;

(ಈ) ನಿರ್ಮಿಸಿದ್ದಲ್ಲಿ, ಟೋಲ್‌ವಾರು ವಿವರವಾದ ಮಾಹಿತಿ ನೀಡುವುದು ;

(ಉ) ನಿರ್ಮಿಸದಿದ್ದಲ್ಲಿ, ಯಾವಾಗ ನಿರ್ಮಿಸಲಾಗುವುದು ; ಈವರೆವಿಗೂ ಈ ನಿಯಮವನ್ನು ಪಾಲಿಸದಿರಲು ಕಾರಣವೇನು ;

(ಊ) ಆಂಬುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಇಲ್ಲಿಯವರೆಗೆ ಪ್ರತ್ಯೇಕ ದ್ವಾರ ನಿರ್ಮಿಸದಿರುವ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರವಾದ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯ ರಾಜ್ಯ ಹೆದ್ದಾರಿಗಳನ್ನು – ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೦ (೨೫೫) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ೨೦೧೬-೧೭ರಲ್ಲಿ ನಬಾರ್ಡ್ ಯೋಜನೆಯಲ್ಲಿ ತೆಗೆದುಕೊಂಡ ಕಾಮಗಾರಿಗಳ ವಿವರ ನೀಡುವುದು ;

(ಆ) ೨೦೧೬-೧೭ರಲ್ಲಿ S.H.D.P. ಯೋಜನೆಯಲ್ಲಿ ರಾಯಚೂರು ಜಿಲ್ಲೆಯಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳ ಒಟ್ಟು ಕಿಲೋ ಮೀಟರ್ ಎಷ್ಟು ; ಅದರ ಅಂದಾಜು ಮೊತ್ತ ಎಷ್ಟು ;

(ಇ) ರಾಯಚೂರು ಜಿಲ್ಲೆಗೆ ಸೇರಿರುವ N.H.-167 ರಸ್ತೆ ಅಭಿವೃದ್ಧಿಯ ಪ್ರಸ್ತಾವನೆ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಕಲ್ಮಲೂ ಕ್ರಾಸ್‌ದಿಂದ ಗಿಣಿಗೇರಾ S.H.-23ಯನ್ನು ರಾಷ್ಟ್ರೀಯ ಹೆದ್ದಾರಿ N.H.ನ್ನಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಅದೇ ರೀತಿಯಾಗಿ S.H.-23 ರಾಯಚೂರುದಿಂದ ಬಾಚಿ (Bhachi) (ವಯಾ ಲಿಂಗಸುಗೂರು) S.H.-20ಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ (N.H.) ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಸ್ಥಳೀಯ ಸಂಸ್ಥೆಗಳಿಗೆ ಕಸ ವಿಲೇವಾರಿಗಾಗಿ ಹಣ ಬಿಡುಗಡೆಯಾಗಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೧ (೨೬೪) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩ ರಿಂದ ೨೦೧೫-೧೬ನೇ ಸಾಲಿನವರೆಗೆ ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಕಸ ವಿಲೇವಾರಿಗಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ಸ್ಥಳೀಯ ಸಂಸ್ಥೆಗಳವಾರು ವರ್ಷವಾರು ಸ್ಪಷ್ಟ ಮಾಹಿತಿ ನೀಡುವುದು)

(ಆ) ಈ ಕಸ ವಿಲೇವಾರಿ ಮಾಡಲು ಪಡೆದಿರುವ ಯಾವ ಯಾವ ಗುತ್ತಿಗೆದಾರರಿಗೆ ಯಾವ್ಯಾವ ಲೆಕ್ಕಶೀರ್ಷಿಕೆಯಡಿಯಲ್ಲಿ ಎಷ್ಟೆಷ್ಟು ಹಣ ಮಂಜೂರು ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಸ್ಥಳೀಯ ಸಂಸ್ಥೆಗಳಲ್ಲಿ ಕಸ ವಿಲೇವಾರಿಯಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಸ್ಥೆಗಳವಾರು ಮತ್ತು ಇದರಲ್ಲಿ ಭಾಗಿಯಾಗಿರುವ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ ೧೯೬೦ರಡಿ ನೋಂದಣಿಯಾದ ಬಿಡಿಎ ಎಂಪ್ಲಾಯಿಸ್ ವೆಲ್‌ಫೇರ್ ಅಸೋಸಿಯೇಷನ್ ಅಕ್ರಮಗಳ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) –**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) –**

೨೨ (೨೭೮+೩೨೩) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಹಕಾರ ಸಂಘಗಳನ್ನು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ ೧೯೬೦ರ ಕಾರ್ಯನಿರ್ವಹಣೆ ಪ್ರಾರಂಭದಿಂದ ಇಲ್ಲಿಯವರೆಗೂ ಯಾವ ದಿನಾಂಕದಿಂದ ಯಾವ ದಿನಾಂಕಗಳವರೆಗೂ ಸಹಕಾರ ಮತ್ತು ಕಂದಾಯ ಇಲಾಖೆಗಳಿಂದ ಕಾರ್ಯನಿರ್ವಹಿಸಲ್ಪಡುತ್ತಿತ್ತು ; ಇಲಾಖೆಗಳಿಗೆ ವರ್ಗಾವಣೆಯಾದ ಆದೇಶಗಳನ್ನು ಒದಗಿಸುವುದು ;

(ಆ) ಬಿಡಿಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಯಾವ ಕಾನೂನಿನಡಿ ಸ್ಥಾಪನೆಯಾಯಿತು ; ಬೈಲಾ ಪ್ರಕಾರ ಯಾರ್‍ಯಾರು ಅಸೋಸಿಯೇಷನ್‌ನಲ್ಲಿ ಸದಸ್ಯತ್ವ ಪಡೆಯಬಹುದು ; ಈ ಅಸೋಸಿಯೇಷನ್ ಇಲ್ಲಿಯವರೆಗೂ ಕಾಲಕಾಲಕ್ಕೆ ಸರ್ವಸದಸ್ಯರ ಸಭೆ, ವಿಶೇಷ ಸದಸ್ಯರ ಸಭೆ, ಆಡಿಟ್ ವರದಿ, ಚುನಾವಣೆ ಪ್ರಕ್ರಿಯೆಗಳನ್ನು ನಡೆಸಿದ ಬಗ್ಗೆ ಮಾಹಿತಿಗಳನ್ನು ಸಲ್ಲಿಸಲಾಗಿದೆಯೇ ; ಇದ್ದಲ್ಲಿ, ಯಾವ ದಿನಾಂಕದಿಂದ ಯಾವ ದಿನಾಂಕದವರೆಗೂ ಸಲ್ಲಿಸಲಾಗಿದೆ ;

(ಇ) ಸದರಿ ಅಸೋಸಿಯೇಷನ್ ಗೃಹ ನಿರ್ಮಾಣ ಸಹಕಾರ ಸಂಘಗಳಂತೆ ಬಡಾವಣೆ ರಚಿಸಿ, ನಿವೇಶನಗಳನ್ನು ಹಂಚಿಕೆ ಮಾಡುವ ಅಧಿಕಾರವನ್ನು ಹೊಂದಿದೆಯೇ ; ಒಟ್ಟು ಸದಸ್ಯರ ಶೇಕಡ ೧೦ರಷ್ಟು ಸಹ ಸದಸ್ಯತ್ವ ಹೊಂದಲು ಅವಕಾಶವಿದೆಯೇ ;

(ಈ) ಅಸೋಸಿಯೇಷನ್ ವತಿಯಿಂದ ದೊಡ್ಡಕಲ್ಲಸಂದ್ರ ಮತ್ತು ಲಿಂಗಧೀರನಹಳ್ಳಿ ಗ್ರಾಮಗಳಲ್ಲಿ ಬಡಾವಣೆ ರಚಿಸಿ, ಒಟ್ಟು ಎಷ್ಟು ನಿವೇಶನಗಳನ್ನು ನಿರ್ಮಿಸಲಾಗಿದೆ ; ಅವುಗಳನ್ನು ಪ್ರಾಧಿಕಾರದ ಅಧಿಕಾರಿ/ನೌಕರರಿಗೆ ಮತ್ತು ಪ್ರಾಧಿಕಾರಕ್ಕೆ ಬಂದಿದ್ದ ಎರವಲು ಸೇವಾ ಅಧಿಕಾರಿ/ನೌಕರರು ಇತರೆ ಇಲಾಖೆಗಳ ನೌಕರರು ಮತ್ತು ಸಾರ್ವಜನಿಕರಿಗೆ ಯಾವ ದಿನಾಂಕಗಳಂದು ಯಾವ ಅಳತೆಯ ನಿವೇಶನಗಳನ್ನು ಹಂಚಿಕೆ ಮತ್ತು ನೋಂದಣಿ ಮಾಡಿಕೊಡಲಾಗಿದೆ ; (ಹೆಸರು, ನಿವೇಶನ ಸಂಖ್ಯೆ ಮತ್ತು ಸದಸ್ಯತ್ವದ ಸಂಖ್ಯೆ, ಅಳತೆವಾರು ವಿವರದ ಮಾಹಿತಿ ನೀಡುವುದು) ಈ ಪಟ್ಟಿಗೆ ಇಲಾಖೆಯಿಂದ ಅನುಮತಿ ನೀಡಲಾಗಿದೆಯೆ ;

(ಉ) ಅಸೋಸಿಯೇಷನ್ ಬೈಲಾದಲ್ಲಿ ನಿವೃತ್ತಿ ಹೊಂದಿದ ನೌಕರರು ಕಾರ್ಯಕಾರಿ ಸಮಿತಿಯಲ್ಲಿ ಮುಂದುವರೆಯಬಾರದೆಂದು ಇದ್ದರೂ ಸಹ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಅಕ್ರಮವಾಗಿ ಅಸೋಸಿಯೇಷನ್‌ನಲ್ಲಿ ಮುಂದುವರೆದಿರುವುದು ನಿಜವೇ ; ಈ ಅವ್ಯವಹಾರಗಳ ಬಗ್ಗೆ ಕೈಗೊಂಡಿರುವ ಕ್ರಮಗಳೇನು ಅಥವಾ ಕೈಗೊಳ್ಳಲಾಗುವ ಕ್ರಮಗಳೇನು ?

## ಗ್ರಾಮಪಂಚಾಯತ್ ವಿದ್ಯುತ್ ಬಿಲ್ಲಿನ ಬಾಕಿ ಮತ್ತು ಪವರ್ ಸಬ್ಸಿಡಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೩ (೨೦೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರಾಮ ಪಂಚಾಯತ್‌ಗಳ ವಿದ್ಯುತ್ ಬಿಲ್ಲು ಪಾವತಿ, ಲೆಕ್ಕ ಸಮನ್ವಯ ಹಾಗೂ ಬಿಲ್ಲಿನ ಮನ್ನಾಕ್ಕೆ ಸಂಬಂಧಿಸಿದಂತೆ ೨೦೦೫ರ ನಂತರ ಹೊರಡಿಸಿರುವ ಆದೇಶಗಳಾವುವು ; (ಪ್ರತಿ ಒದಗಿಸುವುದು)

(ಆ) ಇಲ್ಲಿಯವರೆಗೆ ಗ್ರಾಮ ಪಂಚಾಯತ್‌ಗಳಿಂದ ಎಸ್ಕಾಂಗೆ ಪಾವತಿಸಲು ಬಾಕಿಯಿರುವ ಒಟ್ಟು ವಿದ್ಯುತ್ ಬಿಲ್ಲಿನ ಮೊತ್ತವೆಷ್ಟು ; ಸದರಿ ವರ್ಷದಲ್ಲಿ ಪಾವತಿಯಾದ ಮೊತ್ತವೆಷ್ಟು ; (ಜಿಲ್ಲೆ, ತಾಲ್ಲೂಕುವಾರು ವಿವರ ನೀಡುವುದು)

(ಇ) ಶೇಕಡ ೧೦೦ರಷ್ಟು ವಿದ್ಯುತ್ ಬಿಲ್ಲು ಪಾವತಿಸುವ ಗ್ರಾಮ ಪಂಚಾಯಿತಿಗಳಿಗೆ "ಪವರ್ ಸಬ್ಸಿಡಿ" ನೀಡುವ ಬಗ್ಗೆ ಸರ್ಕಾರ ಆದೇಶ ಹೊರಡಿಸಿದೆಯೇ ; ಹೊರಡಿಸಿದ್ದಲ್ಲಿ, ಆದೇಶದ ಪ್ರತಿ ಒದಗಿಸುವುದು ;

(ಈ) ಇದುವರೆಗೂ ಯಾವ ಯಾವ ಗ್ರಾಮ ಪಂಚಾಯಿತಿಗಳಿಗೆ ಪವರ್ ಸಬ್ಸಿಡಿ ಪ್ರೋತ್ಸಾಹ ಧನ ನೀಡಲಾಗಿದೆ ; (ಗ್ರಾಮ ಪಂಚಾಯತ್ ಹೆಸರು ಮತ್ತು ಪಾವತಿಸಿದ ಮೊತ್ತದ ವಿವರ ನೀಡುವುದು)

(ಉ) ಕಳೆದ ಮೂರು ವರ್ಷಗಳಲ್ಲಿ ಪ್ರತಿ ವರ್ಷಾಂತ್ಯಕ್ಕೆ ಶೇ. ೧೦೦ರಷ್ಟು ವಿದ್ಯುತ್ ಬಿಲ್ಲು ಪಾವತಿಸಿದ ಗ್ರಾಮ ಪಂಚಾಯತ್ ವಿವರ ನೀಡುವುದು ; (ಗ್ರಾಮ ಪಂಚಾಯತ್ ಹೆಸರು ಮತ್ತು ಪಾವತಿಸಿದ ಮೊತ್ತದ ವಿವರ ನೀಡುವುದು)

(ಊ) ಈಗಾಗಲೇ ಸರ್ಕಾರ ನೀಡಿದ ಭರವಸೆಯಂತೆ ವಿದ್ಯುತ್ ಬಿಲ್ಲು ಬಾಕಿಯಿರಿಸಿಕೊಳ್ಳದ ಗ್ರಾಮ ಪಂಚಾಯತ್‌ಗಳಿಗೆ ಪವರ್ ಸಬ್ಸಿಡಿ, ಪ್ರೋತ್ಸಾಹ ಧನ ಬಿಡುಗಡೆ ಮಾಡುವ ಬಗ್ಗೆ ಮತ್ತು ಬಾಕಿ ಇರುವ ವಿದ್ಯುತ್ ಬಿಲ್ಲುಗಳ ಮೇಲಿನ ಬಡ್ಡಿ ಮನ್ನಾ ಮಾಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಬೆಲೆ ನಿಗದಿ ಫಲಕ ಹಾಕದಿರುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೪ (೨೨೯) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಎಷ್ಟು ಹಾಪ್‌ಕಾಮ್ಸ್ ಮಳಿಗೆಗಳಿವೆ ; ಎಲ್ಲಾ ಮಳಿಗೆಗಳಲ್ಲೂ ತರಕಾರಿ ಮತ್ತು ಹಣ್ಣುಗಳಿಗೆ ಏಕರೂಪದ ಬೆಲೆ ನಿಗದಿ ಮಾಡಲಾಗಿದೆಯೇ ;

(ಆ) ಮಳಿಗೆಗಳ ಮುಂದೆ ಕಡ್ಡಾಯವಾಗಿ ಸಾರ್ವಜನಿಕರಿಗೆ ಕಾಣುವಂತೆ ಬೆಲೆಸೂಚಕ ಫಲಕಗಳನ್ನು ಹಾಕಬೇಕೆಂಬ ನಿಯಮ ಇದೆಯೇ ಅಥವಾ ಇಲ್ಲವೇ ;

(ಇ) ಫಲಕಗಳಲ್ಲಿ ಬೆಲೆ ನಮೂದಿಸದೆ ನಿಗಧಿತ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಎಷ್ಟು ಮಳಿಗೆಗಳಿಗೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದ್ದಾರೆ ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಈ) ತನಿಖೆ ಮಾಡಿರುವ ಮತ್ತು ಮಾಡಲು ನಿಯೋಜನೆಗೊಂಡಿರುವ ಅಧಿಕಾರಿಗಳು ಯಾರ್ಯಾರು ; ಕಳೆದ ಎರಡು ವರ್ಷಗಳಲ್ಲಿ ಅವರು ಎಷ್ಟು ಮಳಿಗೆಗಳಿಗೆ ಭೇಟಿ ನೀಡಿ ತಪಾಸಣೆ ಮಾಡಿದ್ದಾರೆ ; ಎಷ್ಟು ಜನ ತಪ್ಪಿತಸ್ಥರ ಮೇಲೆ ಯಾವ ರೀತಿ ಕ್ರಮ ಕೈಗೊಂಡಿದ್ದಾರೆ ; (ವಿವರ ನೀಡುವುದು)

(ಉ) ತನಿಖೆ ಮಾಡಿ ಕ್ರಮ ಕೈಗೊಳ್ಳದಿದ್ದರೆ, ಅಂತಹ ಕರ್ತವ್ಯ ಲೋಪವೆಸಗಿದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಗದಗದಲ್ಲಿರುವ ಪಶುವೈದ್ಯಕೀಯ ಮಹಾವಿದ್ಯಾಲಯದ ಕಟ್ಟಡ ಕಾಮಗಾರಿ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೫ (೨೭೯) ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗದಗದಲ್ಲಿರುವ ಪಶು ವೈದ್ಯಕೀಯ ಮಹಾ ವಿದ್ಯಾಲಯದ ಕಟ್ಟಡದ ಕಾಮಗಾರಿ ಕಾರ್ಯ ಪೂರ್ಣಗೊಂಡಿದೆಯೇ ; ಇದಕ್ಕಾಗಿ ಕಾಯ್ದಿರಿಸಿದ ಹಾಗೂ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಆ) ಈ ಪಶು ವೈದ್ಯಕೀಯ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಭಾರತೀಯ ಪಶು ವೈದ್ಯಕೀಯ ಪರಿಷತ್, ನವದೆಹಲಿ, ಇವರಿಗೆ ಅರ್ಜಿಯನ್ನು ಯಾವಾಗ ಸಲ್ಲಿಸಲಾಗಿದೆ ;

(ಇ) ಇದನ್ನು ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು ?

## ಹೊಸಪೇಟೆ–ಕೂಡ್ಲಿಗಿ–ಚಿತ್ರದುರ್ಗ ರಸ್ತೆಯು ಶಿಥಿಲವಾಗಿದ್ದು ದುರಸ್ತಿ ಮಾಡಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೬ (೨೨೬) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಪೇಟೆಯಿಂದ ಕೂಡ್ಲಿಗಿ ಮೂಲಕ ಚಿತ್ರದುರ್ಗವನ್ನು ತಲುಪುವ ಹೆದ್ದಾರಿ ರಸ್ತೆಯು ಶಿಥಿಲವಾಗಿದ್ದು, ರಸ್ತೆಯಲ್ಲಿ ಹೆಚ್ಚು ಹೆಚ್ಚು ಗುಂಡಿಗಳು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದಾಗಿ ಪ್ರಯಾಣಿಕರು ಮತ್ತು ಚಾಲನೆ ನಡೆಸುವವರು ತುಂಬಾ ತೊಂದರೆ ಪಡುತ್ತಿದ್ದು, ತುರ್ತಾಗಿ ರಸ್ತೆಯ ಗುಂಡಿ ಮುಚ್ಚುವ ಹಾಗೂ ತೇಪೆ ಹಾಕುವ ಕಾರ್ಯ ನಡೆಸಲು ಸರ್ಕಾರ ಮುಂದಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ;

(ಇ) ಈ ರಸ್ತೆಯನ್ನು ಸಂಪೂರ್ಣವಾಗಿ ಅಭಿವೃದ್ಧಿ ಪಡಿಸಲು ವಿಶೇಷವಾಗಿ ಹಣ ಬಿಡುಗಡೆಗೊಳಿಸುವ ನಿಟ್ಟಿನಲ್ಲಿ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ;

(ಈ) ಇದಕ್ಕೆ ಬೇಕಾಗುವ ಕಾಲಾವಧಿ ಎಷ್ಟು ?

## ಬ್ರೂಸೆಲ್ಲೋಸಿಸ್ ಖಾಯಿಲೆಯಿಂದ ಪಶು ಸಿಬ್ಬಂದಿಗಳಿಗೆ ಉಂಟಾಗಿರುವ ತೊಂದರೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೭ (೧೫೧) ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಭಾಗಗಳಲ್ಲಿ ಹಸುಗಳಿಗೆ ಬ್ರೂಸೆಲ್ಲೋಸಿಸ್ ರೋಗ ಇರುವುದು ಪತ್ತೆಯಾಗಿದೆ ; ಈ ರೋಗಕ್ಕೆ ತುತ್ತಾಗಿರುವ ಒಟ್ಟು ಜಾನುವಾರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೋಗದ ಗುಣಲಕ್ಷಣಗಳಾವುವು ; ಇದನ್ನು ನಿವಾರಿಸಲು ಜಾನುವಾರುಗಳಿಗೆ ಉಚಿತ ಔಷಧಿ/ಲಸಿಕೆಯನ್ನು ಒದಗಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಈ ರೋಗ ಪತ್ತೆ ಹಚ್ಚುವ ಹಾಗೂ ನಿವಾರಿಸುವ ಕಾರ್ಯದಲ್ಲಿ ತೊಡಗಿರುವ ಪಶು ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳ ಆರೋಗ್ಯದ ಮೇಲೂ ಈ ರೋಗ ಪ್ರಭಾವ ಬೀರಿದೆಯೇ ;

(ಈ) ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ಜನ ಸಿಬ್ಬಂದಿಗಳಿಗೆ ರೋಗದಿಂದ ತೊಂದರೆಯುಂಟಾಗಿದೆ ಹಾಗೂ ಯಾವ ರೀತಿಯ ಖಾಯಿಲೆಗಳಿಂದ ಬಳಲುತ್ತಿದ್ದಾರೆ ; ಇದರ ನಿವಾರಣೆಗೆ ಹಾಗೂ ಸಿಬ್ಬಂದಿಗಳ ರಕ್ಷಣೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಎಸ್‌ಸಿಪಿ/ಟಿಎಸ್‌ಪಿ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮ (೨೬೯) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆಗಳ ಅಡಿಯಲ್ಲಿ ಮಂಜೂರಾದ, ಬಿಡುಗಡೆಯಾದ, ಖರ್ಚಾದ ಮತ್ತು ಉಳಿತಾಯವಾಗಿರುವ ಮೊತ್ತ ಎಷ್ಟು ; (ವರ್ಷವಾರು, ಕಾಮಗಾರಿವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ಕಾಮಗಾರಿಗಳನ್ನು ಟೆಂಡರ್ ಮುಖಾಂತರ ನೀಡಲಾಗಿದೆಯೇ ಅಥವಾ ನೇರವಾಗಿ ನೀಡಲಾಗಿದೆಯೇ ; ಟೆಂಡರ್ ಮೂಲಕ ನೀಡಿದ್ದಲ್ಲಿ, ಪ್ರತಿಯೊಂದು ಕಾಮಗಾರಿಗೆ ಒಟ್ಟು ಎಷ್ಟು ಜನ ಗುತ್ತಿಗೆದಾರರು ಕೊಟೇಶನ್ ಸಲ್ಲಿಸಿರುತ್ತಾರೆ ? ಸಲ್ಲಿಸಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

## ರೈತರ ಸಾಲಮನ್ನಾ ಮಾಡುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯ (೨೩೦) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೀಕರ ಬರಗಾಲ ಇರುವುದರಿಂದ ರೈತರು ಸಹಕಾರ ಸಂಘಗಳಿಂದ ಹಾಗೂ ಬ್ಯಾಂಕುಗಳಿಂದ ಪಡೆದ ಸಾಲವನ್ನು ಮನ್ನಾ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಹಾಗಿದ್ದಲ್ಲಿ, ರೈತರ ಸಾಲಮನ್ನಾ ಮಾಡಲು ಸರ್ಕಾರಕ್ಕೆ ಇರುವ ಅಡಚಣೆಗಳೇನು ;

(ಇ) ಎಷ್ಟು ಜನ ರೈತರಿಗೆ ಸಾಲಮನ್ನಾದಿಂದ ಪ್ರಯೋಜನ ಆಗುತ್ತದೆ ;

(ಈ) ರೈತರ ಸಾಲಮನ್ನಾ ಮಾಡಲು ಎಷ್ಟು ಹಣ ಬೇಕಾಗುತ್ತದೆ ?

**ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು**

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦ (೨೧೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸದಾಗಿ ನೋಂದಣಿಯಾಗುವ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಯೋಜನೆಯಲ್ಲಿ ರೈತರಿಗೆ ಗೊಂದಲವಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೆಸ್ಕಾಂ ವ್ಯಾಪ್ತಿಯಲ್ಲಿ ೧ ಹೆಚ್.ಪಿ.ಗೆ ೧೦,೦೦೦/– ರೂ.ಗಳಂತೆ ಶುಲ್ಕ ಪಾವತಿಸಲು ತಿಳಿಸಿದ್ದು, ಈ ಕುರಿತು ಸ್ಪಷ್ಟನೆ ನೀಡುವುದು ;

(ಇ) ಇಂಧನ ಇಲಾಖೆಯ ಸುತ್ತೋಲೆ ಸಂಖ್ಯೆ: ಇಎನ್–೪೧ ವಿಎಸ್‌ಸಿ–೨೦೧೪/ಪಿ೧, ದಿನಾಂಕ: ೧೪.೦೭.೨೦೧೪ರನ್ವಯ ಇರುವ ಮಾನದಂಡನೆಗಳನ್ನು ಬದಲಾಯಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ಕುರಿತು ವಿವರ ನೀಡುವುದು ;

(ಈ) ಹೊಸದಾಗಿ ನೀರಾವರಿ ಪಂಪ್‌ಸೆಟ್‌ಗಳಿಗೆ ಹೊಸ ಸಂಪರ್ಕ ಪಡೆಯಲು ಇಲಾಖೆಗೆ ಪಾವತಿಸಬೇಕಾದ ಭದ್ರತಾ ಠೇವಣಿ ಹಣದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 731 – ಪಿ5